## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ವಿ.ಹಂಚಿನಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM-92 /2009/ ARE-5 ದಿನಾಂಕ. 27.08.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM-92 /2009/ ARE-5 ದಿನಾಂಕ. 25.08.2016.

------

**ಪ್ರಸ್ತಾವನೆ**

ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 27.08.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ.

ಶ್ರೀ ಮೋಹನ ದುಂಡೆಪ್ಪ ನನ್ನೂರಿ, ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರು, ಮಾಸೂರು ಗ್ರಾಮ, ಹಿರೇಕೆರೂರ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಮಾಸೂರು ಗ್ರಾಮದಲ್ಲಿ ಎರಡು ನೀರಿನ ಟ್ಯಾಂಕ್‌ಗಳನ್ನು ಕಳಪೆಯಾಗಿ ನಿರ್ಮಾಣ ಮಾಡಿರುವುದರಿಂದ ಈಗಾಗಲೇ ಹಾನಿಗೊಳಗಾಗಿದೆಯೆಂದು, ಇದಕ್ಕೆ ಈ ಕೆಳಕಂಡವರು ಜವಾಬ್ದಾರರಾಗಿರುತ್ತಾರೆಂದು ಹಾಗೂ ಸದರಿ ಟ್ಯಾಂಕ್‌ಗಳನ್ನು ನಿರ್ಮಾಣ ಮಾಡಲು ಸಾರ್ವಜನಿಕರಿಂದ ಹಣವನ್ನು ಸಹ ವಸೂಲು ಮಾಡಲಾಗಿದೆಯೆಂದು ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ :-

1. ಶ್ರೀ ಅನವತ್ತಿ ಬಿ.ಬಿ., ಕಾರ್ಯದರ್ಶಿ, ಗ್ರಾಮ ಪಂಚಾಯತಿ ಮಾಸೂರು, ಪ್ರಸ್ತುತ ಹುಲ್ಲತ್ತಿ ಗ್ರಾಮ ಪಂಚಾಯತಿ, ಹಿರೇಕೆರೂರ ತಾಲ್ಲೂಕು.
2. ಶ್ರೀ ರಮೇಶ ಕೊಟ್ರಪ್ಪ ನ್ಯಾಮತಿ, ಹಿಂದಿನ ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ,
3. ಶ್ರೀ ಎಂ.ಜಿ.ಕಮ್ಮಾರ, ಹಿಂದಿನ ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಹಿರೇಕೆರೂರು.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:-

1. ಸಮಗ್ರ ನೀರು ಸರಬರಾಜು ಯೋಜನೆಯ ಕಾಮಗಾರಿಗೆ ಅಂದಾಜು ಮೊತ್ತ ರೂ. 73,26,086/-ಗಳು ಮಂಜೂರಾಗಿದ್ದು, ಈ ಕಾಮಗಾರಿಗೆ ರೂ. 64,05,557/- ಗಳನ್ನು ಪಾವತಿಸಲಾಗಿದೆ.

2. ಅಂದಾಜು ಮೊತ್ತ ರೂ. 8.35 ಲಕ್ಷ ವೆಚ್ಚದಲ್ಲಿ ಮಾಸೂರು ಗ್ರಾಮದ ಬಿ.ಟಿ.ಪಾಟೀಲ್ ಶಾಲೆಯ ಹಿಂಭಾಗದಲ್ಲಿ ನಿರ್ಮಿಸಲಾದ ನೀರಿನ ಟ್ಯಾಂಕ್‌ನಲ್ಲಿ ಬಿರುಕುಗಳು ಉಂಟಾಗಿ ನೀರು ಸೋರಿಕೆಯಾಗುತ್ತಿದೆ ಮತ್ತು ಪ್ಲಾಸ್ಟರಿಂಗ್ ಕಳಚಿ ಉಕ್ಕಿನ ಸರಳುಗಳು ಗೋಚರಿಸುತ್ತಿದೆ.

ಸದರಿ ಕಳಪೆ ಕಾಮಗಾರಿಗೆ ಈ ಕೆಳಕಂಡವರು ಜವಾಬ್ದಾರರಾಗಿರುತ್ತಾರೆಂದು ತಿಳಿಸಲಾಗಿದೆ:-

1. ಶ್ರೀ ಅನವತ್ತಿ ಬಿ.ಬಿ., ಅಂದಿನ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರ ತಾಲ್ಲೂಕು, ಹಾವೇರಿ ಜಿಲ್ಲೆ.
2. ಶ್ರೀ ರಮೇಶ ಕೊಟ್ರಪ್ಪ ನ್ಯಾಮತಿ, ಹಿಂದಿನ ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ.
3. ಶ್ರೀ ಎಂ.ಜಿ.ಕಮ್ಮಾರ, ಹಿಂದಿನ ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಹಿರೇಕೆರೂರು.
4. ಶ್ರೀ ಕೆ.ವಿ.ಹಂಚಿನಮನಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು.
5. ಶ್ರೀ ಎಂ.ಸಿ.ಗೌಡ, ಹಿಂದಿನ ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಮಾಸೂರ(ಪ್ರಸ್ತುತ ನಿವೃತ್ತ).
6. ಶ್ರೀ ನಾರಾಯಣಪ್ಪ ವಿ. ಗಾಯಕವಾಡ, ಅಂದಿನ ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ.

ಸದರಿ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಮೇಲಿನ 6 ಜನ ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆಯಲಾಗಿದ್ದು, ಆಪಾದಿತರು ತಮ್ಮ ವಿರುದ್ಧ ಮಾಡಲಾದ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಮಾಸೂರು ಗ್ರಾಮದ ಬಿ.ಟಿ.ಪಾಟೀಲ್ ಶಾಲೆಯ ಹಿಂಭಾಗದಲ್ಲಿ ನಿರ್ಮಾಣ ಮಾಡಲಾದ ನೀರಿನ ಟ್ಯಾಂಕ್ ಕಳಪೆಯಾಗಿದ್ದು ಹಾನಿಗೊಳಗಾಗಲು ಮೇಲಿನ 6 ಜನ ಆಪಾದಿತರು ಜವಾಬ್ದಾರರಾಗಿದ್ದಾರೆಂದು, ಇದರಿಂದ ಆಪಾದಿತರು ಸರ್ಕಾರಕ್ಕೆ 8.35 ಲಕ್ಷ ರೂ.ಗಳು ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆಂದು, ಹಾಗಾಗಿ ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಪರಿಗಣಿಸಲು ಸಾಧ್ಯವಿಲ್ಲವೆಂದು, ಪ್ರಶ್ನಿತ ಕಾಮಗಾರಿಯು 2009ನೇ ಸಾಲಿಗೆ ಸಂಬಂಧಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಎಂ.ಸಿ.ಗೌಡ, ಹಿಂದಿನ ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಮಾಸೂರು ಇವರು ಪ್ರಸ್ತುತ ಸೇವೆಯಿಂದ ನಿವೃತ್ತರಾಗಿರುವುದರಿಂದ ಇವರ ವಿರುದ್ಧದ ಆರೋಪವನ್ನು ಕೈ ಬಿಡಲಾಗಿದೆಯೆಂದು, ಇನ್ನುಳಿದ ಆಪಾದಿತರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ /

ಸಮಾಧಾನಕರ ಅಂಶಗಳು ಕಂಡುಬರುತ್ತಿಲ್ಲವೆಂದು, ಸದರಿಯವರುಗಳು ಸಾರ್ವಜನಿಕ / ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ, ಪ್ರಕರಣದಲ್ಲಿ ಭಾಗಿಯಾಗಿರುವ ಮೇಲೆ ತಿಳಿಸಿರುವ ಇಬ್ಬರು ಅಧ್ಯಕ್ಷರುಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ತಿಳಿಸಿ, ಇನ್ನುಳಿದ 3 ಜನ ಆಪಾದಿತರುಗಳ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ 5 ಜನ ಆಪಾದಿತರುಗಳು ಮಾಸೂರು ಗ್ರಾಮದ ಬಿ.ಟಿ.ಪಾಟೀಲ್ ಶಾಲೆಯ ಹಿಂಭಾಗದಲ್ಲಿ ನಿರ್ಮಾಣ ಮಾಡಲಾದ ನೀರಿನ ಟ್ಯಾಂಕ್ ಕಳಪೆಯಾಗಿ ನಿರ್ಮಿಸಿ ಹಾನಿಗೊಳಗಾಗಲು ಜವಾಬ್ದಾರರಾಗಿ ಸರ್ಕಾರಕ್ಕೆ 8.35 ಲಕ್ಷ ರೂ.ಗಳು ಆರ್ಥಿಕ ನಷ್ಟ ಉಂಟು ಮಾಡಿರುವುದು ತನಿಖಾ ವರದಿ / ದಾಖಲೆಗಳಿಂದ ಸ್ಪಷ್ಟವಾಗುತ್ತದೆ. ಹಾಗಾಗಿ ಸದರಿಯವರುಗಳು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪದ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವಿರುತ್ತದೆ.

ಆದ್ದರಿಂದ, ಶ್ರೀ ರಮೇಶ ಕೊಟ್ರಪ್ಪ ನ್ಯಾಮತಿ ಮತ್ತು ಶ್ರೀ ನಾರಾಯಣಪ್ಪ ವಿ. ಗಾಯಕವಾಡ, ಹಿಂದಿನ ಅಧ್ಯಕ್ಷರುಗಳು ಮಾಸೂರು ಗ್ರಾಮ ಪಂಚಾಯತಿ ಇವರುಗಳು ಎಸಗಿರುವ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಅಡಿಯಲ್ಲಿ ಸೂಕ್ತ ಕ್ರಮ ಜರುಗಿಸಲು ಹಾಗೂ ಇನ್ನುಳಿದ 3 ಜನ ಆಪಾದಿತರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 110 ಇಎನ್‌ಕ್ಯೂ 2016 ಬೆಂಗಳೂರು, ದಿನಾಂಕ. 27.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಅನವತ್ತಿ ಬಿ.ಬಿ., ಅಂದಿನ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ (ಪ್ರಸ್ತುತ ಹುಲ್ಲತ್ತಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.

2. ಶ್ರೀ ಎಂ.ಜಿ.ಕಮ್ಮಾರ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ', ಹಿರೇಕೆರೂರು (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿರಹಟ್ಟಿ, ಗದಗ ಜಿಲ್ಲೆ)

3. ಶ್ರೀ ಕೆ.ವಿ.ಹಂಚಿನಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು (ಹಾಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹಿರೇಕೆರೂರು)

ಶ್ರೀ ರಮೇಶ ಕೊಟ್ರಪ್ಪ ನ್ಯಾಮತಿ ಮತ್ತು ಶ್ರೀ ನಾರಾಯಣಪ್ಪ ವಿ. ಗಾಯಕವಾಡ, ಹಿಂದಿನ ಅಧ್ಯಕ್ಷರುಗಳು ಮಾಸೂರು ಗ್ರಾಮ ಪಂಚಾಯತಿ ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಎಸಗಿರುವ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಅಡಿಯಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊಲೀಸಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
7. ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಅನವತ್ತಿ ಬಿ.ಬಿ., ಕಾರ್ಯದರ್ಶಿ, ಹುಲ್ಲತ್ತಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
9. ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿರಹಟ್ಟಿ, ಗದಗ ಜಿಲ್ಲೆ
10. ಶ್ರೀ ಕೆ.ವಿ.ಹಂಚಿನಮನಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹಿರೇಕೆರೂರು.
11. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ,ಬಿ&ಸಿ).
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.